ಶ್ರೀ ಆರ್. ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :-

ಅ) ಬಿಜಾಪುರ ಜಿಲ್ಲಾ ಆಸ್ಪತ್ರೆಯಲ್ಲಿ ಮೂಲಭೂತ ಸೌಕರ್ಯಕ್ಕಾಗಿ 2005-06 ರಲ್ಲಿ ರೂ. 16,72,125 ಹಾಗೂ 2006-07ರಲ್ಲಿ ರೂ. 15,97,936 ಹಣವನ್ನು ಖರ್ಚು ಮಾಡಲಾಗಿದೆ. ಅತ್ಯಾಧುನಿಕ ಉಪಕರಣಗಳಿಗಾಗಿ 2005-06ರಲ್ಲಿ ರೂ. 92,10,538 ಹಾಗೂ 2006-07ರಲ್ಲಿ ರೂ. 1,46,640 ಹಣವನ್ನು ಖರ್ಚು ಮಾಡಲಾಗಿದೆ.

ಆ) ಬಂದಿದೆ.

ಬಿಜಾಪುರ ಜಿಲ್ಲಾ ಆಸ್ಪತ್ರೆಯಲ್ಲಿ 27 ವೈದ್ಯರ ಹುದ್ದೆ ಮಂಜೂರಾಗಿದ್ದು 18 ವೈದ್ಯರು ಕರ್ತವ್ಯ ನಿರ್ವಹಿಸುತ್ತಿದ್ದಾರೆ. 9 ವೈದ್ಯರ ಹುದ್ದೆ ಖಾಲಿ ಇರುತ್ತವೆ. ಇತರೆ ಸಿಬ್ಬಂದಿಗಳ 291 ಹುದ್ದೆ ಮಂಜೂರಾಗಿದ್ದು 230 ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ 61 ಸಿಬ್ಬಂದಿಗಳ ಹುದ್ದೆ ಖಾಲಿ ಇದೆ.

ಇ) ವಿಶೇಷ ನೇರ ನೇಮಕಾತಿಯಿಂದ 500 ವೈದ್ಯಾಧಿಕಾರಿಗಳ ಹುದ್ದೆಗಳನ್ನು ನೇಮಕ ಮಾಡಲು ಅನುಮತಿ ನೀಡಲಾಗಿದ್ದು ಅದರಲ್ಲಿ ಈಗಾಗಲೇ 250 ವೈದ್ಯಾಧಿಕಾರಿಗಳ ಹುದ್ದೆಗಳ ನೇಮಕಾತಿ ಪ್ರಕ್ರಿಯೆ ಪೂರ್ಣಗೊಂಡಿದೆ. ಉಳಿದ 250 ವೈದ್ಯಾಧಿಕಾರಿಗಳ ಹುದ್ದೆಯ ನೇಮಕಾತಿ ಪ್ರಕ್ರಿಯೆ ಅಂತಿಮ ಹಂತದಲ್ಲಿರುತ್ತದೆ ಹಾಗೂ ಗುತ್ತಿಗೆ ಆಧಾರದ ಮೇಲೆ ವೈದ್ಯಾಧಿಕಾರಿಗಳನ್ನು ನೇಮಕ ಮಾಡಿಕೊಳ್ಳಲು ಜಿಲ್ಲಾಧಿಕಾರಿಗಳಿಗೆ ಅಧಿಕಾರ ನೀಡಲಾಗಿದೆ ಹಾಗೂ 2807 ಅರೆ ವೈದ್ಯಕೀಯ ಸಿಬ್ಬಂದಿಗಳನ್ನು ನೇಮಕಾತಿ ಮಾಡಲು ನೇಮಕಾತಿ ಕಾರ್ಯ ಅಂತಿಮ ಹಂತದಲ್ಲಿದ್ದು ನೇಮಕಾತಿ ಕಾರ್ಯ ಮುಗಿದ ಕೂಡಲೇ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

ಈ) 2007-08ರಲ್ಲಿ ಮೂಲಭೂತ ಸೌಕರ್ಯ ಇತ್ಯಾದಿಗಳನ್ನು ಒದಗಿಸಲು ಖರ್ಚು ಮಾಡಲಿರುವ ಹಣ ಸುಮಾರು ರೂ. 65,00,000

ಮೊರಾರ್ಜಿ ದೇಸಾಯಿ ಅಲ್ಪಸಂಖ್ಯಾತರ ವಸತಿ ಶಾಲೆಗಳನ್ನು ಪ್ರಾರಂಭಿಸುವುದು

621 (713) ಶ್ರೀ ಚನ್ನಬಸವರಾಜ್ (ಅಪ್ಪಾಜಿ) ಶಂಕರರಾವ್ ನಾಡಗೌಡ (ಮುದ್ದೇಬಿಹಾಳ) :- ಮಾನ್ಯ ಶ್ರೀ ಕಾರ್ಮಿಕ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ತಿಳಿಸುವರೇ ?

ಅ) ಬಿಜಾಪುರ ಜಿಲ್ಲಾ ವ್ಯಾಪ್ತಿಯಲ್ಲಿರುವ ಮೊರಾರ್ಜಿ ದೇಸಾಯಿ ಅಲ್ಪಸಂಖ್ಯಾತರ ವಸತಿ ಶಾಲೆಗಳ ಸಂಖ್ಯೆ ಎಷ್ಟು ;

ಆ) ಯಾವ ಯಾವ ಊರುಗಳಲ್ಲಿ ಸದರಿ ವಸತಿ ಶಾಲೆಗಳನ್ನು ಪ್ರಾರಂಭಿಸಲಾಗಿದೆ;

ಇ) ಮುದ್ದೇಬಿಹಾಳ್ ಕ್ಷೇತ್ರದಲ್ಲಿ ಅಲ್ಪಸಂಖ್ಯಾತರ ಬಡಜನರು ಹೆಚ್ಚಿನ ಸಂಖ್ಯೆಯಲ್ಲಿದ್ದು ಈವರೆವಿಗೂ ಮೊರಾರ್ಜಿ ದೇಸಾಯಿ ಅಲ್ಪಸಂಖ್ಯಾತರ ವಸತಿ ಶಾಲೆಗಳನ್ನು ಪ್ರಾರಂಭಿಸಲು ಸರ್ಕಾರ ಮುಂದೂಡಲು ಕಾರಣವೇನು ;

ಈ) ಹಾಗಿದ್ದಲ್ಲಿ, ಈಗಲಾದರೂ ಪ್ರಾರಂಭಿಸಲು ಸರ್ಕಾರ ಸಕಾಲಿಕ ಕ್ರಮಗಳನ್ನು ಕೈಗೊಳ್ಳುವುದೇ ?

ಶ್ರೀ ಇಕ್ಬಾಲ್ ಅನ್ಸಾರಿ (ಕಾರ್ಮಿಕ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು) :–

ಅ) ಸರ್ಕಾರಿ ಆದೇಶ ಸಂಖ್ಯೆ ಸಕಇ 8 ಅಸಂಯೋ 2007, ದಿನಾಂಕ 08–03–2007ರಲ್ಲಿ ಬಿಜಾಪೂರ ತಾಲ್ಲೂಕು, ಬಿಜಾಪೂರ ಜಿಲ್ಲೆಗೆ ಆಂಗ್ಲ ಮಾಧ್ಯಮದ ಅಲ್ಪಸಂಖ್ಯಾತರ ಹೆಣ್ಣು ಮಕ್ಕಳ ಒಂದು ಮೊರಾರ್ಜಿ ದೇಸಾಯಿ ವಸತಿ ಶಾಲೆಯನ್ನು 2007–08ನೇ ಶೈಕ್ಷಣಿಕ ವರ್ಷದಿಂದ ಪ್ರಾರಂಭಿಸಲು ಮಂಜೂರಾತಿ ನೀಡಲಾಗಿದೆ.

ಆ) ಬಿಜಾಪೂರ ನಗರದಲ್ಲಿ ಪ್ರಾರಂಭಿಸಲಾಗಿದೆ.

ಇ) ಈ ಕುರಿತು ಯಾವುದೇ ಪ್ರಸ್ತಾವನೆ ಬಂದಿರುವುದಿಲ್ಲ. ಆಯವ್ಯಯದಲ್ಲಿ ನೀಡಲಾಗಿರುವ ಅನುದಾನದ ಲಭ್ಯತೆ ಹಾಗೂ ಅವಶ್ಯಕತೆಗೆ ಅನುಗುಣವಾಗಿ ವಸತಿ ಶಾಲೆಗಳನ್ನು ಮಂಜೂರು ಮಾಡಲ್ಪಡುತ್ತವೆ.

622 (1102) ಶ್ರೀ ಚನ್ನಬಸವರಾಜ್ (ಅಪ್ಪಾಜಿ) ಶಂಕರರಾವ್ ನಾಡಗೌಡ (ಮುದ್ದೇಬಿಹಾಳ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ :–

ಅ) ರಾಜ್ಯದಲ್ಲಿ ಕಳೆದ 3 ವರ್ಷಗಳಲ್ಲಿ ಎಷ್ಟು ಔಷಧಿಗಳ ಮಾರಾಟಕ್ಕೆ ನಿರ್ಬಂಧ ವಿಧಿಸಲಾಗಿದೆ ;

ಆ) ನಿರ್ಬಂಧ ವಿಧಿಸಿದ ನಂತರ ಅವುಗಳ ಪುನರ್ ಮಾರಾಟವಾಗದಂತೆ ಸರಕಾರ ಕೈಗೊಂಡಿರುವ ಕ್ರಮಗಳೇನು ;

ಇ) ನಿರ್ಬಂಧ ವಿಧಿಸಲಾದ ಔಷಧಿಗಳ ಹೆಸರುಗಳನ್ನು ಬದಲಾಯಿಸಿ ಪುನರ್ ಮಾರಾಟ ಮಾಡುತ್ತಿರುವ ಎಷ್ಟು ಪ್ರಕರಣಗಳನ್ನು ದಾಖಲಿಸಿ ಕ್ರಮ ಜರುಗಿಸಲಾಗಿದೆ.

ಈ) ಹಾಗಿದ್ದಲ್ಲಿ, ಪುನರ್ ಮಾರಾಟದ ಪ್ರಕರಣಗಳನ್ನು ದಾಖಲಿಸಿದ ನಂತರ ಆಪಾದಿತರ ಮೇಲೆ ಕೈಗೊಳ್ಳುವ ಕಾನೂನು ಕ್ರಮಗಳೇನು ?

ಶ್ರೀ ಆರ್. ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :–

ಅ) ಔಷಧ ಮತ್ತು ಕಾಂತಿವರ್ಧಕ ಅಧಿನಿಯಮ 1940ರ ಸೆಕ್ಷನ್ 26ಎ ಅನ್ವಯ ಯಾವುದೇ ಔಷಧಿಯ ಮಾರಾಟಕ್ಕೆ ನಿರ್ಬಂಧ ವಿಧಿಸುವ ಅಧಿಕಾರ ಕೇಂದ್ರ ಸರ್ಕಾರಕ್ಕೆ ಮಾತ್ರ ಇದೆ.

ಕಳೆದ 03 ವರ್ಷಗಳಲ್ಲಿ ಕೇಂದ್ರ ಸರ್ಕಾರ ಅಧಿಸೂಚನೆ ಸಂಖ್ಯೆ : (1) ಜಿಎಸ್ಆರ್ 810 (ಇ) ದಿನಾಂಕ 13/12/2004 ಮತ್ತು (2) ಜಿಎಸ್ಆರ್ 510 (ಇ) ದಿನಾಂಕ 25/7/2005ರ ಪ್ರಕಾರ ಅನುಕ್ರಮವಾಗಿ ಈ ಕೆಳಕಂಡ 02 ಔಷಧಿಗಳನ್ನು ನಿರ್ಬಂಧಿಸಿದೆ.